ಶ್ರೀ ಕೆ.ಜಿ.ಕುಮಾರಸ್ವಾಮಿ:– ಇದಕ್ಕಾಗಿ ನಾನು ಮಾನ್ಯ ಸಚಿವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಕಳೆದ ಬಾರಿ ಬಹಳಷ್ಟು ಜನ ಹೆಣ್ಣುಮಕ್ಕಳು ಅಲ್ಲಿ ಸ್ನಾನ ಮಾಡುತ್ತಿರುವ ಸಂದರ್ಭದಲ್ಲಿ ಅಲ್ಲಿ ಯಾವುದೇ ಮರೆ ಕೂಡ ಮಾಡಿರಲಿಲ್ಲ. ಆದಷ್ಟು ಬೇಗನೇ ಇದು ಆಗಬೇಕು. ಜಾಸ್ತಿ ಸ್ನಾನ ಘಟ್ಟಗಳಲ್ಲಿ ಹೆಣ್ಣುಮಕ್ಕಳಿಗೆ ಅವಕಾಶ ಮಾಡಿಕೊಡಬೇಕೆಂದು ವಿನಂತಿಮಾಡಿಕೊಳ್ಳುತ್ತೇನೆ.

ಪ್ರಶ್ನೆ ಸಂಖ್ಯೆ: 26 [172]

ಅಧ್ಯಕ್ಷರು:– ಮಾನ್ಯ ರವಿ ಸುಬ್ರಹ್ಮಣ್ಯರವರೆ, ತಮ್ಮ ಪ್ರಶ್ನೆಯನ್ನು ವರ್ಗಾವಣೆ ಮಾಡಲಾಗಿದೆ.

ಪ್ರಶ್ನೆ ಸಂಖ್ಯೆ: 27 [51]

[ಮಾನ್ಯ ಸದಸ್ಯರು ಗೈರುಹಾಜರಾಗಿದ್ದರು]

ಪ್ರಶ್ನೆ ಸಂಖ್ಯೆ: 28 [50]

[ಮಾನ್ಯ ಸದಸ್ಯರು ಗೈರುಹಾಜರಾಗಿದ್ದರು]

ಗರಡಿ ಮನೆ ಹಾಗೂ ಈಜುಕೊಳ ನಿರ್ಮಿಸುವುದು

30 (01) ಶ್ರೀ ಅಪ್ಪಾ ಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ): ಮಾನ್ಯ ಪ್ರವಾಸೋದ್ಯಮ, ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಬಿಜಾಪುರ ಜಿಲ್ಲೆಯ ಕ್ರೀಡಾಪಟುಗಳು ವಿವಿಧ ಕ್ರೀಡೆಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಪ್ರಶಸ್ತಿಗಳನ್ನು ಗಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಜಿಲ್ಲೆಯ ಕ್ರೀಡಾಪಟುಗಳಿಗೆ ಸೂಕ್ತ ತರಬೇತಿ ಹೊಂದಲು ಬಿಜಾಪುರದಲ್ಲಿ "ಗರಡಿ ಮನೆ" ಮತ್ತು "ಈಜುಕೊಳ" ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ?

ಇ) ಹಾಗಿದ್ದಲ್ಲಿ "ಗರಡಿ ಮನೆ" ಹಾಗೂ "ಈಜುಕೊಳ" ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಯೋಜನೆಗಳೇನು? ಯಾವಾಗ ಮಂಜೂರಾತಿ ನೀಡಲಾಗುವುದು?

ಈ) ಬಿಜಾಪುರ ಜಿಲ್ಲೆಯ ವಿವಿಧ ಕ್ರೀಡೆಗಳ ಕ್ರೀಡಾಪಟುಗಳಿಗೆ ಯಾವ ಯಾವ ಸೌಲಭ್ಯಗಳನ್ನು ಸರ್ಕಾರ ಒದಗಿಸಿದೆ (ವಿವರ ನೀಡುವುದು);

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು):

ಅ) ಹೌದು

ಆ) ಬಿಜಾಪುರ ಜಿಲ್ಲೆಗೆ ಪ್ರಸಕ್ತ ಸಾಲಿನಲ್ಲಿ 3 ಗರಡಿ ಮನೆ ನಿರ್ಮಾಣಕ್ಕಾಗಿ ರೂ.15.00 ಲಕ್ಷ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಈಜುಕೊಳದ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ.

ಇ) 2010–11ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ 3 ಗರಡಿ ಮನೆ ನಿರ್ಮಿಸಲು ರೂ.15.00 ಲಕ್ಷ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. ಈಜುಕೊಳ ನಿರ್ಮಾಣಕ್ಕಾಗಿ ಜಿಲ್ಲಾ ಕ್ರೀಡಾಂಗಣ ಸಮಿತಿ, ಬಿಜಾಪುರ ಇಲ್ಲಿಂದ ಅಂದಾಜು ವೆಚ್ಚಪಟ್ಟಿ, ನೀಲಿ ನಕಾಶೆಯನ್ನೊಳಗೊಂಡ ಸೂಕ್ತ ಪ್ರಸ್ತಾವನೆಯು ಬಂದ ನಂತರ ಪರಿಶೀಲಿಸಿ ಕ್ರಮ ಜರುಗಿಸಲಾಗುವುದು.

ಈ) ಬಿಜಾಪುರ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾಪಟುಗಳಿಗೋಸ್ಕರ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ.

1. ಬ್ಯಾಸ್ಕೆಟ್‌ಬಾಲ್ ಅಂಕಣ
2. ವಾಲಿಬಾಲ್ ಅಂಕಣ
3. 400 ಮೀಟರ್ ಸಿಂಡರ್ ಟ್ರಾಕ್
4. ಸೈಕ್ಲಿಂಗ್ ಟ್ರ್ಯಾಕ್
5. ಒಳಗಾಂಗಣ ಕ್ರೀಡಾಂಗಣ
   ಪ್ರತ್ಯೇಕವಾಗಿ
6. ಕ್ರೀಡಾ ವಸತಿ ನಿಲಯ
7. ಕ್ರೀಡಾ ಶಾಲೆ

ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ:– ಮಾನ್ಯ ಅಧ್ಯಕ್ಷರೆ, ನಾನು ಬಿಜಾಪುರ ಜಿಲ್ಲೆಯಲ್ಲಿ ಗರಡಿ ಮನೆ ಮತ್ತು ಈಜುಕೊಳಗಳನ್ನು ನಿರ್ಮಾಣ ಮಾಡುವ ಬಗ್ಗೆ ತಮ್ಮ ಮುಖಾಂತರ ಮಾನ್ಯ ಸಚಿವರು ಗಮನ ಸೆಳೆಯಲು ಈ ಪ್ರಶ್ನೆ ಕೇಳಿದ್ದೆ. ಈಗಾಗಲೇ ಬಿಜಾಪುರ ಜಿಲ್ಲೆಗೆ 3 ಗರಡಿ ಮನೆಗಳನ್ನು ಒದಗಿಸಲಾಗಿದೆ. ಆದರೂ, ನಮ್ಮ ಬಿಜಾಪುರ ಜಿಲ್ಲಾ ಕೇಂದ್ರದಲ್ಲಿ ಬಹಳಷ್ಟು ವ್ಯವಸ್ಥಿತ ರೀತಿಯಲ್ಲಿ ಗರಡಿ ಮನೆಯೊಂದು ನಿರ್ಮಾಣವಾಗಬೇಕೆಂದು ತಮ್ಮ ಮೂಲಕ ಮಾನ್ಯ ಸಚಿವರಿಗೆ ಮನವಿಯನ್ನು ಮಾಡಬಯಸುತ್ತೇನೆ. ಬಿಜಾಪುರ ಜಿಲ್ಲೆಯಲ್ಲಿರುವ ಈಜುಕೊಳ ಯುವಜನ ಸೇವಾ ಇಲಾಖೆಯ ವ್ಯಾಪ್ತಿಯಲ್ಲಿಲ್ಲ. ಇದರಿಂದಾಗಿ ಕ್ರೀಡಾಪಟುಗಳಿಗೆ ತರಬೇತಿ ಪಡೆಯಲು ಬಹಳಷ್ಟು ಅನಾನುಕೂಲವಾಗುತ್ತಿದೆ. ಒಂದು ಈಜುಕೊಳವನ್ನು ಬಿಜಾಪುರ ಜಿಲ್ಲಾ ಕೆಂದ್ರದಲ್ಲಿ ಸ್ಥಾಪಿಸಿದರೆ ಒಳ್ಳೆಯದಾಗುತ್ತದೆ ಎನ್ನುವ ಮಾತನ್ನು

ಮಾನ್ಯ ಸಚಿವರ ಗಮನಕ್ಕೆ ತರಬಯಸುತ್ತೇನೆ. ಈಗಾಗಲೇ ಸಾಕಷ್ಟು ಸೌಲಭ್ಯಗಳನ್ನು ಕೊಟ್ಟಿದ್ದಾರೆ. ಆದಾಗ್ಯೂ ಬಿಜಾಪುರ ಜಿಲ್ಲೆಯಲ್ಲಿ ಗರಡಿ ಮನೆಯೊಂದನ್ನು ನಿರ್ಮಿಸುವ ಬಗ್ಗೆ ನಾನು ಏತಕ್ಕಾಗಿ ಪ್ರಸ್ತಾಪ ಮಾಡಿದೆ ಎಂದರೆ, ಜಿಲ್ಲೆಯ ಪೈಲ್ವಾನರು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಸಾಕ್ಷು ಪ್ರಸಿದ್ಧಿಯನ್ನು ಪಡೆದು ಮಿಂಚಿ ಹೋಗಿದ್ದಾರೆ. ಅವರಲ್ಲಿ 50 ಜನರಿಗೆ ಈಗಾಗಲೇ ಪಿಂಚಣಿ ನೀಡುವಂತಹ ಕಾರ್ಯವನ್ನು ಸರ್ಕಾರ ಮಡುತ್ತಿದೆ. ಇನ್ನೂ ಹಲವಾರು ಜನರು ಸದರಿ ಪಿಂಚಣಿಯಿಂದ ವಂಚಿತರಾಗಿದ್ದಾರೆ. ಈಗಾಗಲೇ ಜಿಲ್ಲಾ ಪಂಚಾಯಿತಿಯಿಂದ 39–40 ಜನರಿಗೆ ಪಿಂಚಣಿ ನೀಡಲು approval ಆಗಿ ಬಂದಿದೆ. ನನ್ನ ಮಾಹಿತಿ ಪ್ರಕಾರ ಇನ್ನೂ 20 ಜನರಿಗೆ ಪಿಂಚಣಿ ನೀಡಬೇಕಾಗಿದೆ. ಎಲ್ಲರಿಗೂ ಪಿಂಚಣಿ ಕೊಡುವಂತಾದ್ದು ಆಗಬೇಕು. ಈಗಾಗಲೇ ರಾಜ್ಯ ಮಟ್ಟದಲ್ಲಿ ಭಾಗವಹಿಸಿದ್ದ ಹಳೆ ಪೈಲ್ವಾನರಿಗೆ 700 ರೂ.ಗಳನ್ನು ಮತ್ತು ರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿದ ಹಳೆ ಪೈಲ್ವಾನರಿಗೆ 1000 ರೂ.ಗಳನ್ನು ಕೊಡುತ್ತಿದ್ದಾರೆ. ಇದು ಇಂದಿನ ದಿನಮಾನಗಳಲ್ಲಿ ಬಹಳಷ್ಟು ಕಡಿಮೆ ಎನ್ನುವಂತಹ ಮಾತುಗಳು ಕೇಳಿ ಬರುತ್ತಿದೆ. ಇದನ್ನು ದಯವಿಟ್ಟು ಹೆಚ್ಚು ಮಾಡಬೇಕೆನ್ನುವಂತಹ ವಿನಂತಿಯನ್ನು ಮಾನ್ಯ ಸಚಿವರಿಗೆ ಮಾಡಲಿಕ್ಕೆ ಬಯಸುತ್ತೇನೆ.

ಶ್ರೀ ಜಿ.ಜನಾರ್ಧನ ರೆಡ್ಡಿ:– ಮಾನ್ಯ ಅಧ್ಯಕ್ಷರೆ, ಈಗಾಗಲೇ ಮೂರು ಗರಡಿ ಮನೆಗಳಿಗೆ ತಲಾ 5 ಲಕ್ಷ ರೂ.ಗಳಂತೆ ಒಟ್ಟು 15 ಲಕ್ಷ ರೂ.ಗಳ amount ಅನ್ನು ಬಿಡುಗಡೆ ಮಾಡಿದ್ದೇವೆ. ನಮ್ಮ ಶಾಸಕ ಮಿತ್ರರು ಹೇಳಿದಂತೆ, ಬಿಜಾಪುರ district head quarters ನಲ್ಲಿ ಒಳ್ಳೆಯ ಪ್ರಮಾಣದ ಗರಡಿ ಮನೆಯೊಂದನ್ನು ನಿರ್ಮಾಣ ಮಾಡಬೇಕೆಂಬ ಮನವಿಯನ್ನು ಅವರು ಮಾಡುತ್ತಿದ್ದಾರೆ. ಇದನ್ನು ಖಂಡಿತವಾಗಿಯೂ ಕೂಡ ನಾವು ಕೈಗೆತ್ತಿಕೊಳ್ಳುತ್ತೇವೆ ಎಂಬ ಭರವಸೆಯನ್ನು ಕೊಡುತ್ತೇನೆ. ಇನ್ನು swimming pool ವಿಷಯದಲ್ಲಿ ನಮ್ಮ ನಗರಾಭಿವೃದ್ಧಿ ಇಲಾಖೆ ವತಿಯಿಂದ ಈಗಾಗಲೇ swimming pool ಅನ್ನು take up ಮಾಡುವಂತಹ ಕೆಲಸವನ್ನು ಮಾಡುತ್ತಿದ್ದಾರೆ. ಹಾಗಾಗಿ ಅದಕ್ಕೇನೂ ತೊಂದರೆಯಿಲ್ಲ. ಇನ್ನು pension ವಿಷಯಕ್ಕೆ ಸಂಬಂಧಪಟ್ಟ ಹಾಗೆ, ಸನ್ಮಾನ್ಯ ಮುಖ್ಯಮಂತ್ರಿಗಳ ಜೊತೆಯಲ್ಲಿ ಮಾತನಾಡಿ, ಅದನ್ನು ಹೆಚ್ಚಳ ಮಾಡುವುದಕ್ಕೆ ಪ್ರಾಮಾಣಿಕ ಪ್ರಯತ್ನವನ್ನು ನಾನು ಮಾಡುತ್ತೇನೆ.

ಅಧ್ಯಕ್ಷರು:– ಇಲ್ಲಿಗೆ ಪ್ರಶ್ನೋತ್ತರ ಮುಗಿಯಿತು.